## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಶ್ರೀಧರ್, ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ಹೊಸನಗರ, ಶಿವಮೊಗ್ಗ ಜಿಲ್ಲೆ, ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರಿಕ ಸೇವಾ(ಸಿಸಿಎ) ನಿಯಮಾವಳಿ 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸುವ ಬಗ್ಗೆ.

**ಓದಲಾಗಿದೆ:-**

ಸಹಾಯಕ ನಿಬಂಧಕರು, ಕಾನೂನು ಅಭಿಪ್ರಾಯ-1,ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪತ್ರ ಸಂ.Compt/Uplok/BD/602/2010/ARLO-1, ದಿ:29-10-2014.

**ಪ್ರಸ್ತಾವನೆ:-**

ಶಿವಮೊಗ್ಗ ಜಿಲ್ಲೆ, ಹೊಸನಗರ ತಾಲ್ಲೂಕಿನ ಜೇನಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 2009-10ನೇ ಸಾಲಿನ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ

1) ಶ್ರೀ.ಟಿ.ಆರ್.ಮಾನಪ್ಪ, ಹಿಂದಿನ ಕಾರ್ಯದರ್ಶಿ, ಗ್ರಾಮ ಪಂಚಾಯತಿ, ಮಾರುತಿಪುರ.
2) ಶ್ರೀ.ಪಿ.ಎಸ್.ನಾಗರಾಜ, ಕಾರ್ಯದರ್ಶಿ, ಗ್ರಾಮ ಪಂಚಾಯತಿ, ಜೇನಿ.
3) ಶ್ರೀ.ಹೆಚ್.ಬಿ.ರಾಜಪ್ಪಗೌಡ, ಮಾಜಿ ಅಧ್ಯಕ್ಷರು, ಗ್ರಾಮ ಪಂಚಾಯತಿ, ಜೇನಿ,

ಇವರುಗಳು ಅವ್ಯವಹಾರ ಎಸಗಿ ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಳ್ಳಲಾಗಿದೆ ಹಾಗೂ ಅಳತೆಪುಸ್ತಕವನ್ನು ಪೆನ್ಸಿಲ್‌ನಲ್ಲಿ ನಮೂದಿಸಿ, ಸಹಿ ಮತ್ತು ಸೀಲನ್ನು ಹಾಕದೇ ಕರ್ತವ್ಯಲೋಪವೆಸಗಿರುವುದರಿಂದ ಅವರ ವಿರುದ್ದದ ಶಿಸ್ತುಕ್ರಮ ಕೈಗೊಳ್ಳುವಂತೆ ಶಿವಮೊಗ್ಗ ಜಿಲ್ಲೆ, ಹೊಸನಗರ ತಾಲ್ಲೂಕು, ಭೀಮನಕೆರೆ ಅಂಚೆ, ಕಸಬಾ ಹೋಬಳಿ, ಜೇನಿ ಗ್ರಾಮ ವಾಸಿಯಾದ ಶ್ರೀ ಶಿವಪ್ಪ ಬಿನ್ ರಾಮನಾಯ್ಕ್ ಜಂಬಳ್ಳಿ ಇವರು ಪೂರಕ ದಾಖಲೆಗಳೊಂದಿಗೆ ಕರ್ನಾಟಕ ಲೋಕಾಯುಕ್ತಕ್ಕೆ ದೂರನ್ನು ಸಲ್ಲಿಸಿದ್ದರು.

2) ಮಾನ್ಯ ಲೋಕಾಯುಕ್ತರು ಶ್ರೀ. ಶಿವಪ್ಪ ಬಿನ್ ರಾಮನಾಯ್ಕ್ ಜಂಬಳ್ಳಿ ಇವರು ಲೋಕಾಯುಕ್ತದಲ್ಲಿ ಸಲ್ಲಿಸಿರುವ ದೂರಿನ ಅಂಶಗಳ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಸಹಾಯಕ ಅಭಿಯಂತರರು-1, ತಾಂತ್ರಿಕ ವಿಭಾಗ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರಿಗೆ ಸೂಚಿಸಿದ್ದರು. ಸದರಿಯವರು ಈ ಬಗ್ಗೆ ತನಿಖೆ ನಡೆಸಿ ಸಂಬಂಧಪಟ್ಟ ದಾಖಲೆಗಳೊಂದಿಗೆ ತನಿಖಾ ವರದಿಯನ್ನು ಮಾನ್ಯ ಲೋಕಾಯುಕ್ತರಿಗೆ ಸಲ್ಲಿಸಿರುತ್ತಾರೆ.

3) ಶ್ರೀ ಶ್ರೀಧರ, ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ಹೊಸನಗರ, ಇವರು ಅಳತೆ ಪುಸ್ತಕ ನಂ.10676 ರ ಪುಟ 68 ರಿಂದ 75 ರಲ್ಲಿ ಪೆನ್ಸಿಲ್‌ನಿಂದ ಬರೆದು ಸಹಿ ಮತ್ತು ಸೀಲನ್ನು ಹಾಕದೇ ಕರ್ತವ್ಯಲೋಪವೆಸಗಿರುವುದು ತನಿಖಾವರದಿಯಿಂದ ಸ್ಪಷ್ಟವಾಗಿದ್ದು, ಇವರು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ, ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1)(i),(ii) ಮತ್ತು (iii)ನ್ನು ಉಲ್ಲಂಘಿಸಿರುವುದರಿಂದ ಇವರ ವಿರುದ್ಧ ಶಿಸ್ತುಕ್ರಮ ಜರುಗಿಸಲು ಅನುವಾಗುವಂತೆ ಪ್ರಕರಣವನ್ನು ಇಲಾಖಾ ವಿಚಾರಣೆಗಾಗಿ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಯ ನಿಯಮ 14-ಎ ರನ್ವಯ ತಮ್ಮ ಪ್ರಾಧಿಕಾರಕ್ಕೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತ-2, ಇವರು ಕರ್ನಾಟಕ ಲೋಕಾಯುಕ್ತ ಅಧಿನಿಯಮದ ಕಲಂ 12(3)ರನ್ವಯ ಸಲ್ಲಿಸಿದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

--2--

4) ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಅಡಕಗಳನ್ನು ಸಹಾಯಕ ನಿಬಂಧಕರು, ಕಾನೂನು ಅಭಿಪ್ರಾಯ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮೇಲೆ ಓದಲಾದ ಪತ್ರದೊಂದಿಗೆ ಸರ್ಕಾರಕ್ಕೆ ಕಳುಹಿಸುತ್ತಾ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನನ್ವಯ ಕ್ರಮ ಜರುಗಿಸಿದ ಬಗ್ಗೆ ವರದಿಯನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(4)ರನ್ವಯ ವರದಿ ಮಾಡುವಂತೆ ಕೋರಿರುತ್ತಾರೆ.

5) ಮಾನ್ಯ ಉಪ ಲೋಕಾಯುಕ್ತರವರು ಶಿಫಾರಸ್ಸು ಮಾಡಿರುವಂತೆ ಶ್ರೀ. ಶ್ರೀಧರ್, ಸಹಾಯಕ ಕೃಷಿ ಅಧಿಕಾರಿ ಇವರ ಕರ್ತವ್ಯ ಲೋಪಕ್ಕೆ ಸಂಬಂಧಿಸಿದಂತೆ ಅವರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಪ್ರಕರಣವನ್ನು ಇಲಾಖಾ ವಿಚಾರಣೆಗಾಗಿ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಯ ನಿಯಮ 14-ಎ ರನ್ವಯ ಮಾನ್ಯ ಉಪ ಲೋಕಾಯುಕ್ತ-2 ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 87 ಕೃಪವಿ 2014. ಬೆಂಗಳೂರು, ದಿನಾಂಕ:07-02-2015.**

6) ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ. ಶ್ರೀಧರ್, ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ಹೊಸನಗರ, ಇವರ ವಿರುದ್ದದ ಕರ್ತವ್ಯ ಲೋಪಗಳಿಗೆ ಸಂಬಂದಿಸಿದಂತೆ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 14-ಎ ರನ್ವಯ ಮಾನ್ಯ ಉಪಲೋಕಾಯುಕ್ತ-2 ಇವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್.ಬಸವರಾಜಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ.
(ಸೇವೆಗಳು ಮತ್ತು ಸಮನ್ವಯ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) ಹೊಸಕಟ್ಟಡ, ಬೆಂಗಳೂರು-1.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಸಹಾಯಕ ನಿಬಂಧಕರು, ಕಾನೂನು ಅಭಿಪ್ರಾಯ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

--3--

4. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
5. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
6. ಜಂಟಿ ಕೃಷಿ ನಿರ್ದೇಶಕರು, ಶಿವಮೊಗ್ಗ.
7. ಉಪ ಕೃಷಿ ನಿರ್ದೇಶಕರು–1, ಶಿವಮೊಗ್ಗ, ಶಿವಮೊಗ್ಗ ಜಿಲ್ಲೆ.
8. ಉಪ ಕೃಷಿ ನಿರ್ದೇಶಕರು–2, ಸಾಗರ, ಶಿವಮೊಗ್ಗ ಜಿಲ್ಲೆ.
9. ಸಂಬಂಧಪಟ್ಟ ಅಧಿಕಾರಿಗಳಿಗೆ (ಕೃಷಿ ಆಯುಕ್ತರ ಮೂಲಕ)
10. ಶಾಖಾ ರಕ್ಷಾ ಕಡತ/ಇಲಾಖಾ ಅಂತರ್ಜಾಲತಾಣ/ಹೆಚ್ಚುವರಿ ಪ್ರತಿಗಳು.